# ಬೆಂಗಳೂರು ಉತ್ತರ ವಿಶ್ವವಿದ್ಯಾಲಯ

ಟಮಕ, ಕೋಲಾರ-563 103

ಸಂಖ್ಯೆ: ಬೆಂ.ಉ.ವಿ/ವಿ.ಸಿ.ಪಿ/ಕೋವಿಡ್ ಲಸಿಕೆ/653/2021-22

ದಿನಾಂಕ: 22.06.2021

## ಸುತ್ತೋಲೆ

ವಿಷಯ: ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಸ್ನಾತಕೋತ್ತರ ವಿಭಾಗಗಳು ಹಾಗೂ ಸಂಯೋಜಿತ ಕಾಲೇಜುಗಳ ಎಲ್ಲಾ ಬೋಧಕರು, ಬೋಧಕೇತರರು ಹಾಗೂ ವಿದ್ಯಾರ್ಥಿಗಳು ತಪ್ಪದೆ ಕೋವಿಡ್ ಲಸಿಕೆ ಪಡೆದುಕೊಳ್ಳುವ ಬಗ್ಗೆ.

* * *

ಕೋವಿಡ್ ಸಮಸ್ಯೆಯ ತೀವ್ರತೆಯು ರಾಜ್ಯದಲ್ಲಿ ಗಣನೀಯ ಪ್ರಮಾಣದಲ್ಲಿ ಕಡಿಮೆಯಾಗಿರುವ ಹಿನ್ನಲೆಯಲ್ಲಿ ರಾಜ್ಯ ಸರ್ಕಾರವು ರಾಜ್ಯದ ಬಹುತೇಕ ಜಿಲ್ಲೆಗಳು ಹಾಗೂ ಕ್ಷೇತ್ರಗಳಲ್ಲಿ ಲಾಕ್‌ಡೌನ್ ನಿರ್ಬಂಧನೆಗಳ ಬಗ್ಗೆ ಭಾಗಶಃ ಮತ್ತು ಪೂರ್ಣವಾಗಿ ವಿನಾಯಿತಿ ನೀಡಿರುತ್ತದೆ. ಮುಂದಿನ ದಿನಗಳಲ್ಲಿ ರಾಜ್ಯ ಸರ್ಕಾರವು ಕೋವಿಡ್ ಸಮಸ್ಯೆಯ ಪರಿಸ್ಥಿತಿಯನ್ನು ಅವಲೋಕಿಸಿ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳು ಪಾಠ ಪ್ರವಚನ, ಸಂಶೋಧನೆ ಹಾಗೂ ಪರೀಕ್ಷಾ ಕಾರ್ಯಗಳನ್ನು ಭೌತಿಕವಾಗಿ (Offline) ಪ್ರಾರಂಭಿಸುವ ಬಗ್ಗೆ ಯಾವುದೇ ಸಂದರ್ಭದಲ್ಲಿ ಕಾಲೇಜು ಮತ್ತು ವಿಶ್ವವಿದ್ಯಾಲಯಗಳಿಗೆ ರಾಜ್ಯ ಸರ್ಕಾರದಿಂದ ಸೂಕ್ತ ಮಾರ್ಗದರ್ಶನಗಳೊಂದಿಗೆ ಆದೇಶ ನೀಡಬಹುದು. ಸದರಿ ಆದೇಶದ ಮಾರ್ಗಸೂಚಿಗಳ ಅನುಸಾರ ವಿಶ್ವವಿದ್ಯಾಲಯ ಹಾಗೂ ಕಾಲೇಜುಗಳು ಕಛೇರಿ ಕೆಲಸ, ತರಗತಿಗಳು, ಸಂಶೋಧನೆ ಹಾಗೂ ಪರೀಕ್ಷಾ ಕಾರ್ಯಗಳನ್ನು ಯೋಜಿಸಿಕೊಂಡು ಅನುಷ್ಠಾನಗೊಳಿಸಬೇಕಾಗಿದೆ. ಈ ರೀತಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಹಾಲಿ ಇರುವ SOPಗಳನ್ನು ಪಾಲಿಸುವುದರ ಜೊತೆಗೆ ವಿಶ್ವವಿದ್ಯಾಲಯ ಮತ್ತು ಕಾಲೇಜುಗಳ ಅಧಿಕಾರಿಗಳು, ಬೋಧಕರು, ಬೋಧಕೇತರರು ಮತ್ತು ಇತರೆ ಎಲ್ಲಾ ರೀತಿಯ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಕಛೇರಿ ಮತ್ತು ತರಗತಿಗಳಿಗೆ ಹಾಜರಾಗಲು ತಪ್ಪದೆ ಕೋವಿಡ್ ಲಸಿಕೆ ಪಡೆದುಕೊಳ್ಳುವುದು ಅತ್ಯಾವಶ್ಯಕವಾಗಿದೆ.

ಈ ಮೇಲಿನ ವಿಚಾರದ ಹಿನ್ನಲೆಯಲ್ಲಿ ವಿಶ್ವವಿದ್ಯಾಲಯದ ಅಧಿಕಾರಿಗಳು ಮತ್ತು ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರು ಈ ವಿಚಾರವನ್ನು ತಪ್ಪದೆ ತಮ್ಮ ವಿಭಾಗಗಳ ಹಾಗೂ ಕಾಲೇಜಿನ ಎಲ್ಲಾ ವಿದ್ಯಾರ್ಥಿಗಳು, ಬೋಧಕರು, ಬೊಧಕೇತರರಿಗೆ ತಿಳಿಸಿ, ಸಂಬಂಧಿಸಿದ ಎಲ್ಲರೂ ಕೋವಿಡ್ ಲಸಿಕೆ ಪಡೆದುಕೊಳ್ಳುವಂತೆ ತಿಳುವಳಿಕೆ ನೀಡಲು ಸೂಕ್ತ ಕ್ರಮಕೈಗೊಳ್ಳುವುದು.

ಜೊತೆಗೆ ಕಾಲೇಜು ಪ್ರಾಂಶುಪಾಲರುಗಳು ಹಾಗೂ ವಿಶ್ವವಿದ್ಯಾಲಯದ ಅಧಿಕಾರಿಗಳು ಸಂಬಂಧ ಪಟ್ಟ ತಮ್ಮ ವ್ಯಾಪ್ತಿಯ ಆರೋಗ್ಯ ಇಲಾಖೆ, ಕರ್ನಾಟಕ ಸರ್ಕಾರ ಹಾಗೂ ಇತರೆ ಸಂಸ್ಥೆಗಳ ಜೊತೆ ಸಮಾಲೋಚಿಸಿ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಯು ಸುಲಭವಾಗಿ ತಪ್ಪದೆ ಲಸಿಕೆ ಪಡೆದುಕೊಳ್ಳಲು ಸೂಕ್ತ ಕಾರ್ಯ ಶಿಬಿರವನ್ನು ಯೋಜಿಸಲು ಕ್ರಮಕೈಗೊಳ್ಳುವುದು.

ಕುಲಪತಿಗಳು 22/6

ಕುಲಪತಿಗಳು

ಬೆಂಗಳೂರು ಉತ್ತರ ವಿಶ್ವವಿದ್ಯಾಲಯ

ಗೆ,

ಎಲ್ಲಾ ಪ್ರಾಂಶುಪಾಲರುಗಳು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಸಂಯೋಜಿತ ಕಾಲೇಜುಗಳು.

**ಪ್ರತಿಗಳು:**

1. ಆಪ್ತ ಶಾಖೆ, ಕುಲಪತಿಗಳ ಕಛೇರಿ, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ-563 103.
2. ಕುಲಸಚಿವರು/ ಕುಲಸಚಿವರು (ಮೌ) / ವಿತ್ತಾಧಿಕಾರಿಗಳು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ-563 103.
3. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಮಂಗಸಂದ್ರ, ಕೋಲಾರ.
5. ಕಛೇರಿ ಪ್ರತಿ.